ನಂದಿ ಬೆಟ್ಟದಲ್ಲಿ ಪರಿಸರ ಹಾನಿ

1038 (1266) ಶ್ರೀ ಸಂಪಂಗಿ. ಎನ್ (ಬಾಗೇಪಲ್ಲಿ) : ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿ ಬೆಟ್ಟದಲ್ಲಿ ಪ್ರವಾಸಿಗಳು ಪ್ಲಾಸ್ಟಿಕ್ ಬಾಟಲ್ ಮತ್ತು ಪೇಪರ್ ಮತ್ತು ಮದ್ಯದ ಬಾಟಲ್‌ಗಳನ್ನು ಬಿಸಾಡುವು ದರಿಂದ ಪರಿಸರಕ್ಕೆ ಹಾನಿಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಬಂದಿದ್ದಲ್ಲಿ, ಪರಿಸರ ಸಂರಕ್ಷಣೆಗೆ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಜೆ. ಕೃಷ್ಣ ಪಾಲೇಮಾರ್ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ ಸಚಿವರು) :

ಅ) ಹೌದು.

ಆ) ಪ್ಲಾಸ್ಟಿಕ್ ಬಳಕೆಯನ್ನು ತಡೆಗಟ್ಟಲು ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.

1. ಸರ್ಕಾರದ ಆದೇಶ ಸಂಖ್ಯೆ: ಅಪಜೀ 244/ಇಎನ್ ವಿ/2003(v) ದಿನಾಂಕ: 20-10-2003 ರಲ್ಲಿ ನಂದಿ ಬೆಟ್ಟವನ್ನೊಳಗೊಂಡಂತೆ ಕರ್ನಾಟಕದ ಇಕೋ-ಟೂರಿಸಂ ಸ್ಥಳಗಳಲ್ಲಿ ಪ್ಲಾಸ್ಟಿಕ್ ವಸ್ತುಗಳ ಬಳಕೆಯನ್ನು ನಿಷೇದಿಸಿದೆ.
2. ರಾಜ್ಯದಲ್ಲಿ 20 ಮೈಕ್ರಾನ್ ಗಿಂತ ದಪ್ಪವಾದ ಪ್ಲಾಸ್ಟಿಕ್ ಉತ್ಪಾದನೆಗೆ ಮಾತ್ರ ಅನುಮತಿಸಲಾಗಿದೆ.
3. ತೆಳುವಾದ ಪ್ಲಾಸ್ಟಿಕ್ ಹಾಳೆಗಳ ಮೇಲೆ ಚುನಾವಣಾ ಮತ್ತಿತರ ಭಿತ್ತಿಪತ್ರಗಳನ್ನು ಮುದ್ರಿಸುವುದನ್ನು ನಿಷೇದಿ ಸಲಾಗಿದೆ.
4. ಪ್ಲಾಸ್ಟಿಕ್ ತ್ಯಾಜ್ಯಗಳ ಸಮರ್ಪಕ ವಿಲೇವಾರಿಗೆ ಸಂಬಂಧಿ ಸಿದಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ನಿರಂತರವಾಗಿ ಅರಿವು ಮೂಡಿಸುವ ಪ್ರಯತ್ನ ನಡೆಸಲಾಗುತ್ತಿದೆ.

5. ಪ್ಲಾಸ್ಟಿಕ್ ತ್ಯಾಜ್ಯವನ್ನು ರಸ್ತೆ ನಿರ್ಮಾಣದ ಕಾಮಗಾರಿಯಲ್ಲಿ ಆಸ್ಫಾಲ್ಟ್ ಜೊತೆ ಬಳಕೆಗೆ ಪ್ರೋತ್ಸಾಹಿಸಲಾಗುತ್ತಿದೆ.

ವೈದ್ಯನಾಥನ್ ವರದಿ ಜಾರಿ

1041 (1085) ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವೈದ್ಯನಾಥನ್ ವರದಿಯನ್ನು ಜಾರಿಗೆ ತರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಆ) ಹಾಗಿದ್ದಲ್ಲಿ, ಎಷ್ಟು ದಿವಸದೊಳಗಾಗಿ ಜಾರಿಗೆ ತರಲಾಗುವುದು? ಮಾಹಿತಿ ನೀಡುವುದು;

ಶ್ರೀ ಲಕ್ಷ್ಮಣ ಸವದಿ (ಸಹಕಾರ ಸಚಿವರು) :

ಅ) ಪ್ರೊ॥ ಎ.ವೈದ್ಯನಾಥನ್ ಕಾರ್ಯಪಡೆಯ ವರದಿಯ ಆಧಾರದ ಮೇಲೆ ರಾಜ್ಯ ಸರ್ಕಾರಗಳೊಡನೆ ಸಮಾಲೋಚಿಸಿ ಭಾರತ ಸರ್ಕಾರವು ಕೃಷಿ ಪತ್ತಿನ ಸಹಕಾರಿ ಸಂಸ್ಥೆಗಳ ಪುನರುತ್ಥಾನಕ್ಕಾಗಿ ರೂಪಿಸಿರುವ ಪುನಶ್ಚೇತನ ಪ್ಯಾಕೇಜನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಆ) ದಿನಾಂಕ: 25.03.2008 ರಂದು ಭಾರತ ಸರ್ಕಾರ, ನಬಾರ್ಡು ಮತ್ತು ಕರ್ನಾಟಕ ಸರ್ಕಾರ ಪ್ರೊ॥ ಎ.ವೈದ್ಯನಾಥನ್ ಕಾರ್ಯಪಡೆಯ ಶಿಫಾರಸ್ಸುಗಳ ಆಧಾರದ ಮೇಲೆ ಭಾರತ ಸರ್ಕಾರವು ರಾಜ್ಯ ಸರ್ಕಾರಗ ಳೊಡನೆ ಸಮಾಲೋಚಿಸಿ ಅಲ್ಪಾವಧಿ ಕೃಷಿ ಪತ್ತಿನ ಸಹಕಾರ ಸಂಸ್ಥೆಗಳ ಪುನಶ್ಚೇತನಕ್ಕಾಗಿ ರೂಪಿಸಿರುವ ಪುನಶ್ಚೇತನ ಪ್ಯಾಕೇಜನ್ನು ಅನುಷ್ಠಾನ ಗೊಳಿಸುವ ಸಂಬಂಧದಲ್ಲಿ ತ್ರಿಪಕ್ಷೀಯ ಒಡಂಬಡಿಕೆ (MoU) ಗೆ ಸಹಿ ಹಾಕಿರುತ್ತವೆ. ಸದರಿ ಒಡಂಬಡಿಕೆಗೆ ಅನುಗುಣವಾಗಿ ರಾಜ್ಯ ಸರ್ಕಾರ್ಯವು ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.

1) ಈ ಕಾರ್ಯಕ್ರಮದ ಅನುಷ್ಠಾನದ ಮೇಲ್ವಿಚಾರಣೆ ನೋಡಿಕೊಳ್ಳಲು ಆರ್ಥಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದ ಅನುಷ್ಠಾನ ಸಮಿತಿ (SLIC) ಯನ್ನು ರಚಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಥವಾ ಜಿಲ್ಲಾ